159 SL. NO:- 32 D:-24.08.2026

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ. ಅಬ್ದುಲ್ ಜಬ್ಬಾರ್, ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರ.

ಪ್ರಶ್ನೆ: ರಾಜ್ಯದಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣಗಳು ನಿರಂತರವಾಗಿ ಹೆಚ್ಚುತ್ತಿರುವುದು ಅತ್ಯಂತ ಆತಂಕಕಾರಿ ಸಂಗತಿಯಾಗಿದೆ. ಇಂದಿನ ದಿನಪತ್ರಿಕೆಯಲ್ಲಿ ಪ್ರಕಟವಾಗಿರುವ ವರದಿಯ ಪ್ರಕಾರ, 2023ರಿಂದ ರಾಜ್ಯದಲ್ಲಿ ಒಟ್ಟು 63,447 ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣಗಳು ದಾಖಲಾಗಿವೆ ಎಂಬ ಅಂಶ ಬೆಳಕಿಗೆ ಬಂದಿದೆ. ಈ ಪೈಕಿ ಅತ್ಯಾಚಾರ, ಲೈಂಗಿಕ ಕಿರುಕುಳ, ಕೌಟುಂಬಿಕ ದೌರ್ಜನ್ಯ, ವರದಕ್ಷಿಣೆ ಕಿರುಕುಳ, ಹಿಂಬಾಲಿಸುವಿಕೆ ಹಾಗೂ ಇತರ ರೀತಿಯ ದೌರ್ಜನ್ಯ ಪ್ರಕರಣಗಳ ಸಂಖ್ಯೆಯೇ ಹೆಚ್ಚಾಗಿವೆ.

ಮಹಿಳೆಯರ ಸುರಕ್ಷತೆಗಾಗಿ ಸರ್ಕಾರವು ವಿವಿಧ ಕಾನೂನುಗಳು, ಯೋಜನೆಗಳು ಹಾಗೂ ರಕ್ಷಣಾ ವ್ಯವಸ್ಥೆಗಳನ್ನು ಜಾರಿಗೊಳಿಸಿದ್ದರೂ ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ಪ್ರಕರಣಗಳು ದಾಖಲಾಗುತ್ತಿರುವುದು, ಪ್ರಸ್ತುತ ವ್ಯವಸ್ಥೆಗಳ ಪರಿಣಾಮಕಾರಿತ್ವದ ಬಗ್ಗೆ ಗಂಭೀರವಾಗಿ ಪರಿಶೀಲಿಸುವ ಅಗತ್ಯವನ್ನು ಸೂಚಿಸುತ್ತದೆ.

ವಿಶೇಷವಾಗಿ ಮಹಿಳೆಯರ ಮೇಲಿನ ಅತ್ಯಾಚಾರ, ಲೈಂಗಿಕ ಕಿರುಕುಳ, ಕೌಟುಂಬಿಕ ದೌರ್ಜನ್ಯ, ವರದಕ್ಷಿಣೆ ಕಿರುಕುಳ, ಹಿಂಬಾಲಿಸುವಿಕೆ ಹಾಗೂ ಇತರ ರೀತಿಯ ದೌರ್ಜನ್ಯ ಪ್ರಕರಣಗಳನ್ನು ತಡೆಗಟ್ಟಲು ಪೊಲೀಸ್ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವುದು ಅಗತ್ಯವಾಗಿದೆ. ದೂರು ನೀಡಲು ಮುಂದಾಗುವ ಮಹಿಳೆಯರಿಗೆ ತ್ವರಿತ ಸ್ಪಂದನೆ, ಸಂತ್ರಸ್ತರಿಗೆ ಕಾನೂನು ನೆರವು ಮತ್ತು ಮಾನಸಿಕ ಬೆಂಬಲ ಹಾಗೂ ಪ್ರಕರಣಗಳ ಶೀಘ್ರ ತನಿಖೆ ಮತ್ತು ನ್ಯಾಯ ದೊರಕಿಸುವ ವ್ಯವಸ್ಥೆ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕಾಗಿದೆ.

ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಈ ವಿಚಾರವನ್ನು ತೀವ್ರವಾಗಿ ಪರಿಗಣಿಸಿ, ಮಹಿಳೆಯರ ಮೇಲಿನ ದೌರ್ಜನ್ಯ ತಡೆಗೆ ಪರಿಣಾಮಕಾರಿ ಮತ್ತು ಶಾಶ್ವತ ಕ್ರಮಗಳನ್ನು ಕೈಗೊಂಡು, ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ ತ್ವರಿತ ತನಿಖೆ ಮತ್ತು ತ್ವರಿತ ನ್ಯಾಯ ಒದಗಿಸಲು ವಿಶೇಷ ವ್ಯವಸ್ಥೆ ರೂಪಿಸುವ ಕುರಿತು ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ

ಉತ್ತರ:- ರಾಜ್ಯದಲ್ಲಿ ಮಹಿಳೆಯರ ಮೇಲಿನ ಅಪರಾಧಗಳು 2023ನೇ ಸಾಲಿನಿಂದ ಇಳಿಮುಖವಾಗಿರುತ್ತದೆ. 2023 ರಿಂದ 2026 (ಜುಲೈ) ವರೆಗೆ ವರದಿಯಾಗಿರುವ ಮಹಿಳೆಯರ ಮೇಲಿನ ಅಪರಾಧಗಳ ಪ್ರಕರಣಗಳ ವರ್ಷವಾರು ಹಾಗೂ ಅಪರಾಧವಾರು ವಿವರಗಳು ಈ ಕೆಳಕಂಡಂತಿದೆ.

ಮಹಿಳೆಯರ ಮೇಲಿನ ಅಪರಾಧಗಳು/ದೌರ್ಜನ್ಯ ಪ್ರಕರಣಗಳು

| ವರ್ಷ | 2023 | 2024 | 2025 | 2026 (ಜುಲೈ) |
|---|---|---|---|---|
| ವರದಕ್ಷಿಣೆ ಸಾವು | 158 | 112 | 115 | 83 |
| | | | | |

| | | | | |
|---|---|---|---|---|
| ಅತ್ಯಾಚಾರ | 600 | 621 | 552 | 348 |
| ಲೈಂಗಿಕ ಕಿರುಕುಳ | 6487 | 6334 | 5854 | 3778 |
| ಗಂಡನಿಂದ ಕಿರುಕುಳ | 2955 | 2903 | 2938 | 1878 |
| ವರದಕ್ಷಿಣೆ ನಿಷೇಧ ಕಾಯ್ದೆ | 2339 | 1991 | 1918 | 1176 |
| ಮಹಿಳೆಯರ ಘನತೆಗೆ ಧಕ್ಕೆ (ಇವ್ ಟೀಸಿಂಗ್) | 137 | 180 | 429 | 246 |

ರಾಜ್ಯದಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯಗಳ ತಡೆಗಟ್ಟಲು ಸರ್ಕಾರವು ಕೈಗೊಂಡಿರುವ ಕ್ರಮಗಳು.

1. ಮಹಿಳೆಯರು ಮತ್ತು ಮಕ್ಕಳ ಮೇಲಿನ ಅಪರಾಧಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ Free and Fair registration of cases ಎಂಬುದು ನಮ್ಮ ರಾಜ್ಯದ ಪೊಲೀಸ್ ಇಲಾಖೆಯ ಘೋಷವಾಕ್ಯವಾಗಿದೆ.
2. ಮನೆ ಮನೆಗೆ ಪೊಲೀಸ್ ಕಾರ್ಯಕ್ರಮದಡಿ ಹಳ್ಳಿಗಳಲ್ಲಿ ಸಮೂಹ ಸದಸ್ಯರಿಗೆ ಜಾಗೃತಿ ಮೂಡಿಸಲಾಗಿರುತ್ತದೆ.
3. ಮಹಿಳಾ ಮತ್ತು ಮಕ್ಕಳ ಸುರಕ್ಷತೆ ಮತ್ತು ಸಂರಕ್ಷಣೆಗಾಗಿ 'ಚಿನ್ನಮ್ಮಪಡೆ' ಮತ್ತು "ಆಕ್ಕಪಡೆ" ಯನ್ನುರಚಿಸಲಾಗಿದೆ.
4. ಏಕಾಂಗಿಯಾಗಿ ವಾಸಿಸುವ ಹಿರಿಯ ನಾಗರೀಕರಿಗೆ ಸುರಕ್ಷೆ ಮತ್ತು ವಿಶ್ವಾಸ ನೀಡುವ ಆಶಾಕಿರಣವಾಗಿ"ಆಪರೆ"ಎಂಬ ಸಮುದಾಯ ಪೊಲೀಸ್ ಪರಿಕಲ್ಪನೆಯನ್ನು ಅನುಷ್ಠಾನಗೊಳಿಸಲಾಗಿದೆ.
5. ಕರ್ನಾಟಕ ಸರ್ಕಾರವು ವರದಕ್ಷಿಣೆ ಕಿರುಕುಳ ತಡೆಗಟ್ಟುವ ನಿಟ್ಟಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರ್ದೇಶಕರನ್ನು ಮುಖ್ಯ ವರದಕ್ಷಿಣೆ ನಿಷೇಧ ಅಧಿಕಾರಿಯಾಗಿ ನೇಮಿಸಲಾಗಿದೆ.
6. ಗ್ರಾಮ/ ತಾಲ್ಲೂಕು ಮಟ್ಟದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕಾನೂನು ಸೇವಾ ಪ್ರಾಧಿಕಾರ ಹಾಗೂ ಪೊಲೀಸ್ ಇಲಾಖೆಯ ಸಹಯೋಗದಲ್ಲಿ ಅರಿವು/ ಜಾಗೃತಿ ಕಾರ್ಯಕ್ರಮಗಳನ್ನುಹಮ್ಮಿಕೊಳ್ಳಲಾಗುತ್ತಿದೆ.
7. ಸಮಾಲೋಚನೆ ಮತ್ತು ಕಾನೂನು ನೆರವು-ಪ್ರಕರಣಗಳಲ್ಲಿ ಕಾನೂನು ಸೇವಾ ಪ್ರಾಧಿಕಾರ ಮತ್ತು ಸಂಬಂಧಿತ ಮಹಿಳಾ ರಕ್ಷಣಾ ವ್ಯವಸ್ಥೆಗಳ ನೆರವು ಒದಗಿಸಲಾಗುತ್ತದೆ.
8. ಮಹಿಳಾ ಸಹಾಯವಾಣಿ (1091) ಮತ್ತು 22943225 ಗಳು ನಿರಂತರವಾಗಿ ಕಾರ್ಯನಿರ್ವಹಿಸುತ್ತಿವೆ.
9. ಮಹಿಳಾ ಮತ್ತು ಮಕ್ಕಳ ಸುರಕ್ಷತೆ ಸಂಬಂಧವಾಗಿ 112-ERSS ಕಾರ್ಯನಿರ್ವಹಿಸುತ್ತಿದ್ದು ತ್ವರಿತ ನೆರವು ನೀಡಿ ಕರೆಗಳಿಗೆ ಸ್ಪಂದಿಸಲಾಗುತ್ತಿದೆ.

10. ಬೆಂಗಳೂರು ನಗರದಲ್ಲಿ Safe City Project ಯೋಜನೆಯಡಿಯಲ್ಲಿ ಮಹಿಳಾ ಸುರಕ್ಷತೆ ಸಂಬಂಧವಾಗಿ ಸಿಸಿಟಿವಿ ಕ್ಯಾಮರಗಳನ್ನುಅಳವಡಿಸಲಾಗಿದೆ.

11. ಜನ ಸಂದಣಿ ಸ್ಥಳಗಳಲ್ಲಿ ಮಹಿಳೆಯರ ಸುರಕ್ಷತೆಗಾಗಿ 50 ಸೇಫ್ಟಿಐಲ್ಯಾಂಡ್ (Safety Island) ಗಳನ್ನು ಗುರುತಿಸಿ ಮಹಿಳೆಯರಿಗೆ ರಕ್ಷಣೆ ಒದಗಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಿದ್ದೇವೆ.

12. ರಾಜ್ಯದದಲ್ಲಿ ಕಾರ್ಯನಿರ್ವಹಿಸುತ್ತಿರುವ ಪೊಲೀಸ್ ಠಾಣೆಗಳಲ್ಲಿ Women Help Desk ಗಳನ್ನು ಸ್ಥಾಪಿಸಿ 24/7 ಮಹಿಳಾ ಸುರಕ್ಷತಾ ದೃಷ್ಟಿಯಿಂದ ಕರ್ತವ್ಯ ನಿರ್ವಹಿಸಲಾಗುತ್ತಿದೆ.

13. ಮಹಿಳೆಯರ ಸುರಕ್ಷತೆಯ ದೃಷ್ಟಿಯಿಂದ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಪೊಲೀಸ್ ಠಾಣೆಗಳು, ಮಾನವ ಕಳ್ಳಸಾಗಾಣಿಕೆ ನಿಷೇಧ ಘಟಕಗಳಾಗಿಯೂ ಸಹ (Anti-Human Trafficking Units) ಕಾರ್ಯನಿರ್ವಹಿಸಲಾಗುತ್ತಿದೆ. ವಿಶೇಷ ಮಾನವ ಕಳ್ಳಸಾಗಾಣಿಕೆ ನಿಷೇಧ ಘಟಕವು ಸಿಐಡಿ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿದೆ.

14. ಕೇಂದ್ರ ಸರ್ಕಾರದ ಗೃಹ ಸಚಿವಾಲಯ ಸಹಯೋಗದೊಂದಿಗೆ CCPWC (Cyber Crime Prevention Against Women and Children) ಪೋರ್ಟಲ್ ಅಡಿಯಲ್ಲಿ ಆನ್-ಲೈನ್‌ನಲ್ಲಿ ದಾಖಲಾಗುವ ದೂರುಗಳನ್ನು ದಾಖಲಿಸಿ ಕ್ರಮ ವಹಿಸಲಾಗುತ್ತಿದೆ.

15. ಅಪರಾಧಗಳನ್ನು ತಡೆಗಟ್ಟಲು ಹಾಗೂ ಅಪರಾಧಗಳ ಕುರಿತು ಎಫ್.ಎಂ. ಸಾಮಾಜಿಕ ಜಾಲತಾಣ, ಟಿವಿ& ಪತ್ರಿಕೆ ಮಾಧ್ಯಮಗಳ ಮೂಲಕ ಜನಜಾಗೃತಿ ಮೂಡಿಸಲಾಗುತ್ತಿದೆ.

16. ಕಾಣೆಯಾದ ಮಕ್ಕಳ ಮಾಹಿತಿ ಮತ್ತು ಪತ್ತೆಯಾದ ಮಕ್ಕಳ ಮಾಹಿತಿಯನ್ನು Mission Vathsalya Portal ಗಳಿಗೆ ಸಲ್ಲಿಸಿ ಕೊಂಡು ಅಗತ್ಯ ಕ್ರಮ ಜರುಗಿಸಲಾಗುತ್ತಿದೆ.

17. ಪ್ರತಿ ಗುರುವಾರ ತೆರೆದ ಮನೆ ಕಾರ್ಯಕ್ರಮಗಳಲ್ಲಿ ಮಕ್ಕಳ ಕಾನೂನಿನ ಬಗ್ಗೆ ಮಕ್ಕಳಿಗೆ ಅರಿವು/ ಜಾಗೃತಿ ಮೂಡಿಸಲಾಗುತ್ತಿದೆ.

18. ಸ್ಪೆಶಿಮಿನಲ್ ಕಾನೂನುಗಳ ಅಡಿಯಲ್ಲಿ ಮಹಿಳೆಯ ಮೇಲಿನ ದೌರ್ಜನ್ಯ ಪ್ರಕರಣಗಳನ್ನ 60 ದಿನಗಳೊಳಗೆ ಪೂರ್ಣಗೊಳಿಸಿ, ಆರೋಪಿಗಳ ವಿರುದ್ಧ ದೋಷಾರೋಪಣಪತ್ರವನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಲು ಕಾನೂನಿಗೆ ತಿದ್ದುಪಡಿತರಲಾಗಿರುತ್ತದೆ.

19. ಸಂತ್ರಸ್ತರ ದೂರು/ಅವಹಾಲುಗಳು, ಹೇಳಿಕೆಗಳು, ಜೀವಬೆದರಿಕೆ ಇದ್ದರೆ ಅಗತ್ಯ ರಕ್ಷಣೆಗಾಗಿ ಹಾಗೂ ಪರಿಹೀಲನೆಗಾಗಿ ಮುಂತಾದ ಇತರೆ ಸಮಸ್ಯೆಗಳನ್ನು ಆಲಿಸಲು ಪ್ರತಿ ತಿಂಗಳ 3ನೇ ಭಾನುವಾರವನ್ನು ಸಂತ್ರಸ್ತರ/ದೂರುದಾರರ (Victim's Day) ನೊಂದವರ ದಿನವೆಂಬ ಕಾರ್ಯಕ್ರಮವನ್ನು ಠಾಣಾ ವ್ಯಾಪ್ತಿಯಲ್ಲಿ ಆಯೋಜಿಸಲಾಗುತ್ತಿದೆ.

20. ಅಪರಾಧ ತಡೆಮಾಸ, ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಮುಂತಾದ ಕಾರ್ಯಾಕ್ರಮಗಳ ಮೂಲಕ ಅಪರಾಧಗಳ ಬಗ್ಗೆಅರಿವು ಮೂಡಿಸಲಾಗುತ್ತಿದೆ.

21. ಸಖಿ ಒನ್ ಸ್ಟಾಪ್ ಕೇಂದ್ರಗಳಲ್ಲಿ ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ ಒಂದೇ ಸೂರಿನಡಿಯಲ್ಲಿ ವೈದ್ಯಕೀಯ ಚಿಕಿತ್ಸೆ, ಆಪ್ತಸಮಾಲೋಚನೆ, ಕಾನೂನು ನೆರವು, ವಿಡಿಯೋ ಕಾನ್‌ಫೆರೆನ್ಸ್ ಮೂಲಕ ಮಾನ್ಯ ನ್ಯಾಯಾಧೀಶರ ಮುಂದೆ ನೀಡುವ ಹೇಳಿಕೆಯನ್ನು ರೆಕಾರ್ಡ್ ಸೇವೆ ಇತ್ಯಾದಿ ಸೇವೆಗಳು ಒದಗಿಸಲಾಗುತ್ತಿದೆ.

22. ಇತರೆ ಇಲಾಖೆಗಳ ಸಹಯೋಗದೊಂದಿಗೆ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಹಾಗೂ ಸಹಾಯ ಸಹಕಾರ ಒದಗಿಸಲಾಗುತ್ತಿದೆ.

23. ಮಹಿಳೆಯ ಸುರಕ್ಷತೆಗಾಗಿ ಕರ್ನಾಟಕ ರಾಜ್ಯಪೊಲೀಸ್ ಇಲಾಖೆಯ KSP ವೆಬ್ಸೈಟ್‌ನಲ್ಲಿ ಈಕೆಳಕಂಡ ಸೇವೆಗಳನ್ನುಒದಗಿಸಲಾಗುತ್ತದೆ:

- ಮಹಿಳೆಯರ ಸುರಕ್ಷತೆಗೆ ವಿಶೇಷವಾಗಿ ವಿನ್ಯಾಸ ಗೊಳಿಸಿದ ಆಪ್.
- SOS ಒತ್ತಿದ ತಕ್ಷಣ Control Room ಗೆ ಸೂಚನೆ + ಸ್ಥಳವಿವರ + Audio/Video evidence ಕಳಿಸಲಾಗುತ್ತದೆ.
- Live Location Track ERSS Command Centre ಮೂಲಕ ತ್ವರಿತ ಪ್ರತಿಕ್ರಿಯೆ.
- Women safety awareness & self-defence programmes.

ಸಂಖ್ಯೆ: ಹೆಚ್‌ಡಿ 44 ಎಸ್‌ಡಿಎಸ್ 2026.

(ಪ್ರಿಯಾಂಕ್ ಖರ್ಗೆ)
ಗೃಹ ಸಚಿವರು